# 1ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಗಳ ನ್ಯಾಯಾಲಯ, ಬೆಂಗಳೂರು.

ಸಿಸಿ ನಂ.5473/2012

| | | | |
|---|---|---|---|
| ಹೆಸರು | : | ನಾಗರಾಜು.ಜಿ.ಕೆ. | ಪ್ರಾಸಾ: 10 |
| ತಂದೆಯ ಹೆಸರು | : | ಕುಮಾರಸ್ವಾಮಿ | ಚಾಸಾ: 9 |
| ವಯಸ್ಸು | : | 48 ವರ್ಷ | |
| ಉದ್ಯೋಗ | : | ಖಾಸಗಿ ನೌಕರ | |
| ವಾಸ | : | ಬಿಟಿಎಂ ಲೇ ಔಟ್, ಬೆಂಗಳೂರು. | |

ದಿ: 27.01.2021 ರಂದು ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆ: ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ಆರೋಪಿಗಳು ಗೊತ್ತು, ಆರೋಪಿಗಳು ಕೆಂಗೇರಿಯ ನಗರದಲ್ಲಿ ಸಂಯುಕ್ತ ಎನ್‌ಕ್ಲೇವ್ ಎಂಬ ಲೇ ಔಟ್ ಮಾಡುತ್ತೇವೆಂದು ಪ್ರಕಟಿಸಿದ್ದು, ಅದರಂತೆ ಅಲ್ಲಿ ನಾನು ಎರಡು ನಿವೇಶನಗಳನ್ನು ಖರೀದಿ ಮಾಡಲು ತೀರ್ಮಾನಿಸಿದ್ದೆವು. ಈ ಸಂಬಂಧವಾಗಿ ಸದರಿ ಸಂಸ್ಥೆಯವರು ಸದರಿ ನಿವೇಶನವನ್ನು ತೋರಿಸಿರುತ್ತಾರೆ. ಪ್ರತಿ ಚದರ ಅಡಿಗೆ 750 ರೂ ಯಂತೆ ಮಾರಾಟ ಮೂಡುವುದಾಗಿ ಆರೋಪಿಗಳು ಒಪ್ಪಿಕೊಂಡಿರುತ್ತಾರೆ. ಈ ಪ್ರಕಾರ ಸದರಿ ನಿವೇಶನಕ್ಕೆ ಮಾರಾಟ ಬೆಲೆ ನಿಗಧಿ ಮಾಡಿ ಕರಾರು ಪತ್ರವನ್ನು ಮಾಡಿಸಿಕೊಳ್ಳಲು ಬರುವಂತೆ ನನಗೆ ತಿಳಿಸಿರುತ್ತಾರೆ. ಅದರಂತೆ ದಿ: 20.06.2006 ಮತ್ತು ದಿ: 11.09.2009 ರಂದು ನನಗೆ ಕರಾರು ಪತ್ರವನ್ನು ಬರೆದುಕೊಟ್ಟಿರುತ್ತಾರೆ. ಸದರಿ ಕರಾರು ಪತ್ರದಂತೆ ಮುಂಗಡ ಹಣವಾಗಿ ಒಟ್ಟು 13,00,000/- ಹಣವನ್ನು ಸದರಿ ಸಂಸ್ಥೆಯವರಿಗೆ ಪಾವತಿ ಮಾಡಿದ್ದೇನೆ. ಸದರಿ ಹಣಕ್ಕೆ ಸಂಸ್ಥೆಯವರು ರಸೀದಿಯನ್ನು ಕೊಟ್ಟಿರುತ್ತಾರೆ. ಒಂದು ಪಕ್ಷ ನಿವೇಶನ ಬೇಡವಾದರೆ ಬಡ್ಡಿ ಸಹಿತ ಮುಂಗಡ ಹಣವನ್ನು ವಾಪಸ್

ಕೊಡುತ್ತೇವೆಂದು ತಿಳಿಸಿರುತ್ತಾರೆ. ಆ ನಂತರ ಒಂದು ವರ್ಷದ ನಂತರ ಸದರಿ ಸಂಸ್ಥೆಯ ಕಚೇರಿಗೆ ಭೇಟಿ ಕೊಡಲು ಹೋದಾಗ ಅಲ್ಲಿ ಯಾರು ಇರಲಿಲ್ಲ. ಆದ್ದರಿಂದ ಸದರಿ ಸಂಸ್ಥೆಯವರು ನನಗೆ ಯಾವುದೇ ನಿವೇಶನವನ್ನಾಗಲೀ, ಕೊಟ್ಟಂತಹ ಹಣವನ್ನಾಗಲೀ ಕೊಟ್ಟಿರುವುದಿಲ್ಲ. ಈ ರೀತಿ ಸದರಿ ಸಂಸ್ಥೆಯವರು ನನಗೆ ಮೋಸ ಮಾಡಿರುತ್ತಾರೆ. ಆ ನಂತರ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ದೂರನ್ನು ಸಲ್ಲಿಸಿದ್ದೇನೆ. ಈ ಹಂತದಲ್ಲಿ ಮೂಲ ಕರಾರು ಮತ್ತು ರಸೀದಿ ನನ್ನ ಮನೆಯಲ್ಲಿದ್ದು ಹಾಜರುಪಡಿಸಲು ಸಾಕ್ಷಿ ಸಮಯ ಕೇಳಿದ್ದು, ಸಮಯ ನೀಡಿದೆ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸ. ಇ.

1ನೇ ಅ. ಮು. ಮ. ದಂ. ನ್ಯಾಯಾಲಯ